Akashvani: Bangalore
National Bulletin In Kannada
05.06.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
05.06.2026: 7.35AM

**ಮುಖ್ಯಾಂಶಗಳು :**

1. ವೆನೆಜುವೆಲಾದ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಸಮಾಲೋಚನೆ
2. ಕರ್ನಾಟಕ ಪ್ರವಾಸದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್; ವಿಶ್ವ ಪರಿಸರ ದಿನದ ಹಿನ್ನೆಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ರಾಜ್ಯಸಭೆ ಚುನಾವಣೆಗೆ ಏಳು ಅಭ್ಯರ್ಥಿಗಳನ್ನು ಪ್ರಕಟಿಸಿದ ಕಾಂಗ್ರೆಸ್; ಬೆಂಗಳೂರಿನಲ್ಲಿಂದು ಮಲ್ಲಿಕಾರ್ಜುನ ಖರ್ಗೆ ನಾಮಪತ್ರ - ರಾಹುಲ್ ಗಾಂಧಿ ಭಾಗಿ
4. ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಂಪುಟ ಸದಸ್ಯರಿಗೆ ಖಾತೆ ಹಂಚಿಕೆ
5. ಇಂಡೋನೇಷ್ಯಾ ಓಪನ್ ಬ್ಯಾಡ್ಮಿಂಟನ್; ಪುರುಷರ ಡಬಲ್ಸ್‌ನಲ್ಲಿ ಭಾರತದ ಎಂ.ಆರ್.ಅರ್ಜುನ್ - ಹರಿಹರನ್ ಜೋಡಿ ಕ್ವಾರ್ಟರ್ ಫೈನಲ್ಸ್‌ಗೆ ಪ್ರವೇಶ

**********

ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು, ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರೊಂದಿಗೆ ಮಾತುಕತೆ ನಡೆಸಿದರು. ಇಬ್ಬರೂ ನಾಯಕರು ದ್ವಿಪಕ್ಷೀಯ ಸಂಬಂಧ, ಇಂಧನ, ವ್ಯಾಪಾರ, ಹೂಡಿಕೆ, ಆರೋಗ್ಯ ರಕ್ಷಣೆ ಮತ್ತು ವಾಹನೋದ್ಯಮ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ಸಹಕಾರದ ಹೊಸ ಮಾರ್ಗಗಳ ಬಗ್ಗೆ ಚರ್ಚಿಸಿದರು. ಬಳಿಕ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪೋಸ್ಟ್ ಮಾಡಿದ್ದು, ಇಂಧನ, ನಿರ್ಣಾಯಕ ಖನಿಜಗಳು, ತಂತ್ರಜ್ಞಾನ, ಕೃಷಿ, ಆರೋಗ್ಯ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳಲ್ಲಿ ಸಹಕಾರವನ್ನು ವಿಸ್ತರಿಸುವ ಕುರಿತು ವ್ಯಾಪಕ ಚರ್ಚೆಗಳನ್ನು ನಡೆಸಲಾಗಿದೆ ಎಂದು ಹೇಳಿದ್ದಾರೆ. ಲ್ಯಾಟಿನ್ ಅಮೆರಿಕಾದಲ್ಲಿ ಮೌಲ್ಯಯುತ ಪಾಲುದಾರನಾಗಿ, ವೆನೆಜುವೆಲಾದೊಂದಿಗಿನ ಭಾರತದ ನಿಕಟ ಸಹಕಾರ ಜಾಗತಿಕ ದಕ್ಷಿಣ ಭಾಗಕ್ಕೆ ಅಪಾರ ಪ್ರಾಮುಖ್ಯತೆಯನ್ನು ಹೊಂದಿದೆ. ಎರಡೂ ದೇಶಗಳ ಜನರ ಪರಸ್ಪರ ಪ್ರಯೋಜನಕ್ಕಾಗಿ ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತವೆ ಎಂದು ಅವರು ಹೇಳಿದ್ದಾರೆ. ಮಾತುಕತೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಪೂರ್ವ ವಲಯದ ಕಾರ್ಯದರ್ಶಿ ರುದ್ರೇಂದ್ರ ಟಂಡನ್, ವೆನೆಜುವೆಲಾ ವಿಶ್ವದ ಅತಿದೊಡ್ಡ ತೈಲ ನಿಕ್ಷೇಪ ಹೊಂದಿದೆ. ವೆನೆಜುವೆಲಾದ ಇಂಧನ ವಲಯವು ಮೂಲಭೂತ ಪರಿವರ್ತನೆಗೆ ಒಳಗಾಗುತ್ತಿರುವುದರಿಂದ, ಎರಡೂ ದೇಶಗಳ ನಡುವೆ ಇಂಧನ ಪಾಲುದಾರಿಕೆಯನ್ನು ರೂಪಿಸುವತ್ತ ಇಂದಿನ ಚರ್ಚೆಗಳು ಕೇಂದ್ರೀಕೃತವಾಗಿತ್ತು. ವೆನೆಜುವೆಲಾ ಭಾರತವನ್ನು ಮುಂಬರುವ ಹಲವು ವರ್ಷಗಳವರೆಗೆ ಸ್ಥಿರ ಬೇಡಿಕೆದಾರ ಎಂದು ಪರಿಗಣಿಸುತ್ತದೆ ಎಂದು ಅವರು ಹೇಳಿದರು. ವೆನೆಜುವೆಲಾ ಈಗಾಗಲೇ ಮೂರನೇ ಅತಿದೊಡ್ಡ ಕಚ್ಚಾ ತೈಲ ಪೂರೈಕೆದಾರ ರಾಷ್ಟ್ರವಾಗಿ ಹೊರಹೊಮ್ಮಿದೆ. ಇಂಧನ ಪಾಲುದಾರಿಕೆಯ ಜೊತೆಗೆ, ಪಶುಸಂಗೋಪನೆ, ಸಾರಿಗೆ, ಕೃಷಿ ಉಪಕರಣಗಳು, ವಾಹನ ವಲಯ ಮತ್ತು ಔಷಧೀಯ ವಸ್ತುಗಳಂತಹ ಆರ್ಥಿಕ ಪಾಲುದಾರಿಕೆಯನ್ನು ವಿಸ್ತರಿಸುವ ಬಗ್ಗೆಯೂ ಚರ್ಚೆಗಳು ನಡೆದಿವೆ ಎಂದು ಟಂಡನ್ ಮಾಹಿತಿ ನೀಡಿದರು.

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸೂರತ್ ಮತ್ತು ದಾಮನ್‌ಗೆ ಭೇಟಿ ನೀಡಲಿದ್ದಾರೆ. ಅವರು, ಸುಮಾರು ೧೨ ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ಪ್ರಮುಖ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಲೋಕಾರ್ಪಣೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಇದರಲ್ಲಿ ಸಾರಿಗೆ, ಆರೋಗ್ಯ ರಕ್ಷಣೆ, ಕೈಗಾರಿಕಾ ಮೂಲಸೌಕರ್ಯ, ಇಂಧನ, ನಾಗರಿಕ ವಿಮಾನಯಾನ, ಪ್ರವಾಸೋದ್ಯಮ ಮತ್ತು ಸಾಗರ ಸಂಪರ್ಕದ ಪ್ರಮುಖ ಯೋಜನೆಗಳು ಒಳಗೊಂಡಿವೆ. ಪ್ರಧಾನಿಯವರು ಮಧ್ಯಾಹ್ನ ಗುಜರಾತ್‌ಗೆ ಭೇಟಿ ನೀಡಲಿದ್ದು, ಅಲ್ಲಿ ಕೈಗಾರಿಕಾ ಮೂಲಸೌಕರ್ಯಗಳನ್ನು ಪರಿಶೀಲಿಸಿದ ಬಳಿಕ, ಸೂರತ್‌ನಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುವರು. ಸಂಜೆ ದಾಮನ್‌ಗೆ ಭೇಟಿ ನೀಡಲಿರುವ ಅವರು, ನಮೋ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಹಾಗೂ ನಮೋ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸುವರು.

**********

ವಿಶ್ವ ಪರಿಸರ ದಿನಾಚರಣೆ ಹಿನ್ನೆಲೆಯಲ್ಲಿ ಭಾರತ ವನ ಯೋಜನೆಗೆ ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ರಾಯಚೂರಿನಲ್ಲಿ ನಿನ್ನೆ ಚಾಲನೆ ನೀಡಿದರು. ವಿಶ್ವ ಪರಿಸರ ದಿನದ ಹಿನ್ನೆಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾದರು.ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮದಡಿ ರಾಯಚೂರಿನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ವಿದ್ಯಾರ್ಥಿಗಳೊಂದಿಗೆ ಪರಿಸರ ಮಹತ್ವದ ಬಗ್ಗೆ ಸಂವಾದ ನಡೆಸಿದರು. ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಮಾತನಾಡಿ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮಹತ್ವಾಕಾಂಕ್ಷೆ ಜಿಲ್ಲೆಯ ಪ್ರಗತಿ ಪರಿಶೀಲನೆ ಸಭೆಯನ್ನು ಹಣಕಾಸು ಸಚಿವರು ನಡೆಸಿದ್ದಾರೆ. ಮುಂದಿನ ದಿನಗಳಲ್ಲಿ ರಾಯಚೂರು ಜಿಲ್ಲೆಯು ಮಹತ್ವಾಕಾಂಕ್ಷೆ ಜಿಲ್ಲೆಯ ಪಟ್ಟಿಯಿಂದ ಆದಷ್ಟು ಬೇಗನೆ ಹೊರ ಬರಲಿದೆ ಎಂದರು. ಭಾರತ ವನ ಯೋಜನೆಯಡಿ ಒಟ್ಟು ೭೦ ಸಾವಿರ ಸ್ಥಳೀಯ ಜಾತಿಯ ಸಸಿಗಳನ್ನು ನೆಡಲಾಗುತ್ತಿದೆ. ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ೧೦ ಸಾವಿರ ಸಸಿಗಳು ಹಾಗೂ

ರಾಯಚೂರು ಮಹಾನಗರ ಪಾಲಿಕೆಯ ಘನ ತ್ಯಾಜ್ಯ ನಿರ್ವಹಣಾ ಘಟಕ ಪ್ರದೇಶದಲ್ಲಿ ೫೦ ಸಾವಿರ ಸಸಿಗಳನ್ನು ನೆಡಲಾಗುತ್ತದೆ ಎಂದರು. ಇದಕ್ಕೂ ಮುನ್ನ ಯಾದಗಿರಿ ಜಿಲ್ಲೆಯ ಬದ್ದೆಪಲ್ಲಿಯಲ್ಲಿ ಕೃಷಿ ಸಂಸ್ಕರಣೆಯ ರೈತ ತರಬೇತಿ ಕೇಂದ್ರ ಉದ್ಘಾಟಿಸಿದರು. ಕಲ್ಯಾಣ ಸಂಪದ ಯೋಜನೆಯಡಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಂಸದರ ಅಭಿವೃದ್ಧಿ ಯೋಜನೆಯ ಭಾಗವಾಗಿ ಕೃಷಿ ಸಂಸ್ಕರಣೆ ಮತ್ತು ಗ್ರಾಮೀಣ ಉದ್ಯಮಶೀಲತೆಗೆ ಉತ್ತೇಜನ ನೀಡುವ ಮಹತ್ವದ ಯೋಜನೆ ಇದಾಗಿದೆ. ನಿರ್ಮಲಾ ಸೀತಾರಾಮನ್ ಅವರು ಘಟಕವನ್ನು ವೀಕ್ಷಿಸಿ, ಸಂಸ್ಕರಣ ಘಟಕ ನಿರ್ವಹಿಸುವ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರೊಡನೆ ಸಂವಾದ ನಡೆಸಿದರು. ಬಳಿಕ ಮಾತನಾಡಿದ ಸಚಿವ ನಿರ್ಮಲಾ ಸೀತಾರಾಮನ್, ಯಾದಗಿರಿ ಜಿಲ್ಲೆಯಲ್ಲಿ ಶೇಂಗಾ ಮೌಲ್ಯವರ್ಧನೆ ಮತ್ತು ರೈತರ ಆದಾಯ ಹೆಚ್ಚಿಸಲು ಕೇಂದ್ರ ಸರ್ಕಾರ ಒತ್ತು ನೀಡಲಿದೆ ಎಂದು ತಿಳಿಸಿದರು. ಹಣಕಾಸು ಸಚಿವರು ಇಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಬಳಿಕ ತುಂಗಭದ್ರಾ ಜಲಾಶಯ ರಸ್ತೆಯಲ್ಲಿ ನಿರ್ಮಾಣವಾಗಲಿರುವ ನೂತನ ರಂಗಮಂದಿರಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರಾಜ್ಯದಲ್ಲಿ ಪ್ರಥಮ ಬಾರಿಗೆ ಜಪಾನ್ ಮಾದರಿಯಲ್ಲಿ ನಿರ್ಮಾಣವಾಗುತ್ತಿರುವ ಮಿಯಾವಾಕಿ, ವಿವಿಧ ತೋಟಗಾರಿಕಾ ಬೆಳೆಗಳ ಅರಣ್ಯೀಕರಣ ಕಾರ್ಯಕ್ರಮದಲ್ಲೂ ನಿರ್ಮಲಾ ಸೀತಾರಾಮನ್ ಭಾಗವಹಿಸಲಿದ್ದಾರೆ.

**********

ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯುವ ದ್ವೈವಾರ್ಷಿಕ ಚುನಾವಣೆಗೆ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಏಳು ಅಭ್ಯರ್ಥಿಗಳನ್ನು ಕಾಂಗ್ರೆಸ್ ಪ್ರಕಟಿಸಿದೆ. ಈ ತಿಂಗಳ ೧೮ರಂದು ನಡೆಯಲಿರುವ ಚುನಾವಣೆಗೆ ಕರ್ನಾಟಕದಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ವಕ್ತಾರ ಪವನ್ ಖೇರಾ ಹಾಗೂ ಮನ್ಸೂರ್ ಅಲಿ ಖಾನ್ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಲಾಗಿದೆ. ಮಧ್ಯಪ್ರದೇಶದಿಂದ ಮೀನಾಕ್ಷಿ ನಟರಾಜನ್, ರಾಜಸ್ತಾನದಿಂದ ನೀರಜ್ ಡಾಂಗಿ, ತಮಿಳುನಾಡಿನಿಂದ ಪ್ರವೀಣ್ ಚಕ್ರವರ್ತಿ ಹಾಗೂ ಜಾರ್ಖಂಡ್‌ನಿಂದ ಪ್ರಣವ್ ಝಾ ಅವರು ಅಭ್ಯರ್ಥಿಗಳಾಗಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಮತ್ತಿತರ ಕಾಂಗ್ರೆಸ್ ಮುಖಂಡರು ಉಪಸ್ಥಿತರಿರಲಿದ್ದಾರೆ ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಪರಿಷತ್‌ಗೆ ಆಯ್ಕೆ ಮಾಡಿರುವ ನಾಲ್ವರು ಅಭ್ಯರ್ಥಿಗಳು ಸಹ ಇದೇ ಸಂದರ್ಭದಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ. ಏಳು ಸ್ಥಾನಗಳಿಗೆ ನಡೆಯುತ್ತಿರುವ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಐದನೇ ಅಭ್ಯರ್ಥಿಯನ್ನೂ ಸಹ ಕಣಕ್ಕಿಳಿಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

**********

ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದ ಸದಸ್ಯರಿಗೆ ಖಾತೆಗಳನ್ನು ಹಂಚಿಕೆ ಮಾಡಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಆದೇಶ ಜಾರಿ ಮಾಡಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಣಕಾಸು, ಸಂಪುಟ ವ್ಯವಹಾರಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಗುಪ್ತದಳ ಹಾಗೂ ಹಂಚಿಕೆಯಾಗದ ಎಲ್ಲ ಖಾತೆಗಳ ಉಸ್ತುವಾರಿ ನೋಡಿಕೊಳ್ಳಲಿದ್ದಾರೆ. ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರಿಗೆ ಕಂದಾಯ ಮತ್ತು ಕ್ರೀಡೆ, ಕೆ.ಎಚ್. ಮುನಿಯಪ್ಪ ಅವರಿಗೆ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳು, ಕೆ.ಜೆ. ಜಾರ್ಜ್ - ಇಂಧನ ಮತ್ತು ಪ್ರವಾಸೋದ್ಯಮ, ಎಂ.ಬಿ. ಪಾಟೀಲ್ - ಭಾರೀ ಮತ್ತು ಮಧ್ಯಮ ಕೈಗಾರಿಕೆ, ಮೂಲಭೂತ ಸೌಕರ್ಯ ಇಲಾಖೆ, ರಾಮಲಿಂಗಾರೆಡ್ಡಿ - ಭಾರೀ ಮತ್ತು ಮಧ್ಯಮ ನೀರಾವರಿ, ಸತೀಶ್ ಜಾರಕಿಹೊಳಿ - ಲೋಕೋಪಯೋಗಿ, ಕೃಷ್ಣ ಬೈರೇಗೌಡ - ಗ್ರೇಟರ್ ಬೆಂಗಳೂರು ಅಭಿವೃದ್ಧಿ, ಗ್ರೇಟರ್ ಮಹಾನಗರ ವ್ಯಾಪ್ತಿಯ ಐದು ಪಾಲಿಕೆಗಳ ಜವಾಬ್ದಾರಿ, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಬಿಎಂಆರ್‌ಸಿಎಲ್, ಪ್ರಿಯಾಂಕ್ ಖರ್ಗೆ - ಗೃಹ, ಐಟಿ-ಬಿಟಿ, ಇ-ಆಡಳಿತ, ಯು.ಟಿ. ಖಾದರ್ - ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಈಶ್ವರ್ ಖಂಡ್ರೆ - ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಡಾ. ಯತೀಂದ್ರ ಸಿದ್ದರಾಮಯ್ಯ - ನಗರಾಭಿವೃದ್ಧಿ, ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕೆಯುಐಡಿಎಫ್‌ಸಿ, ಬೆಂಗಳೂರು ನಗರ ಹೊರತುಪಡಿಸಿ, ಉಳಿದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ಸ್ಥಳೀಯ ಯೋಜನಾ ಪ್ರಾಧಿಕಾರಗಳು, ಬೈರತಿ ಸುರೇಶ್ - ಸಾರಿಗೆ, ಶರಣ್ ಪ್ರಕಾಶ್ ಪಾಟೀಲ್ - ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಖಾತೆಗಳನ್ನು ಹಂಚಿಕೆ ಮಾಡಲಾಗಿದೆ.

**********

ಭಾರತ-ಜಿಂಬಾಬ್ವೆ ಜಂಟಿ ರಕ್ಷಣಾ ಸಮಿತಿಯ ಸಭೆ ನವದೆಹಲಿಯಲ್ಲಿ ನಿನ್ನೆ ನಡೆಯಿತು. ಭಾರತ ಮತ್ತು ಜಿಂಬಾಬ್ವೆ ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ವ್ಯಾಪಕಗೊಳಿಸುವ ಬದ್ಧತೆಯನ್ನು ಉಭಯ ದೇಶಗಳು ಪುನರುಚ್ಚರಿಸಿವೆ. ರಕ್ಷಣಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಮಿತಾಭ್ ಪ್ರಸಾದ್ ಮತ್ತು ಜಿಂಬಾಬ್ವೆಯ ಖಾಯಂ ಕಾರ್ಯದರ್ಶಿ ಆರನ್ ಡೇನಿಯಲ್ ಟೊಂಡೆ ನೆಹೆಪೆರಾ ಸಭೆಯ ಸಹ-ಅಧ್ಯಕ್ಷತೆ ವಹಿಸಿದ್ದರು. ತರಬೇತಿ, ಬೆಂಬಲ ಮತ್ತು ಸಾಮಾನ್ಯ ವಾಯು ಆಸ್ತಿಗಳ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಅಸ್ತಿತ್ವದಲ್ಲಿರುವ ಸಹಕಾರವನ್ನು ವಿಸ್ತರಿಸುವ ಮೂಲಕ ದ್ವಿಪಕ್ಷೀಯ ರಕ್ಷಣಾ ಸಂಬಂಧಗಳನ್ನು ಹೆಚ್ಚಿಸಲು ಎರಡೂ ದೇಶಗಳು ಸಮ್ಮತಿಸಿವೆ. ಜಂಟಿ ಉತ್ಪಾದನೆ, ಭಯೋತ್ಪಾದನೆ ನಿಗ್ರಹ, ಗಡಿ ನಿರ್ವಹಣೆ ಮತ್ತು ಶಾಂತಿಪಾಲನೆ ಸೇರಿದಂತೆ ಹೊಸ ಕ್ಷೇತ್ರಗಳಲ್ಲಿ ಸಹಕರಿಸುವ ಮಾರ್ಗಗಳ ಬಗ್ಗೆಯೂ ಅವರು ಚರ್ಚಿಸಿದರು. ೨೦೨೫ರಲ್ಲಿ ಬೆಂಗಳೂರಿನಲ್ಲಿ ನಡೆದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ಸಂದರ್ಭದಲ್ಲಿ ಎರಡೂ ದೇಶಗಳ ರಕ್ಷಣಾ ಸಚಿವರು ಸಹಿ ಮಾಡಿದ ರಕ್ಷಣಾ ಸಹಕಾರದ ಕುರಿತಾದ ತಿಳುವಳಿಕೆ ಪತ್ರದಲ್ಲಿ ನಿಗದಿಪಡಿಸಿದ ಉದ್ದೇಶಗಳನ್ನು ಕಾರ್ಯಗತಗೊಳಿಸುವ ಬಗ್ಗೆಯೂ ಚರ್ಚೆ ನಡೆಸಲಾಗಿದೆ.

**********

ಯೋಗವು ಮಾನವೀಯತೆಗೆ ಭಾರತದ ಶಾಶ್ವತ ಕೊಡುಗೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಹಮದಾಬಾದ್‌ನ ಏಕಾ ಅರೆನಾದಲ್ಲಿ ನಡೆಯುತ್ತಿರುವ ವಿಶ್ವ ಯೋಗಾ ಚಾಂಪಿಯನ್‌ಶಿಪ್‌ನಲ್ಲಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಪ್ರಧಾನಿ, ಯೋಗ ಮನಸ್ಸು, ದೇಹ ಮತ್ತು ಚೈತನ್ಯವನ್ನು ಒಂದುಗೂಡಿಸುತ್ತದೆ. ಆರೋಗ್ಯಕರ ಮತ್ತು ಹೆಚ್ಚು ಸಾಮರಸ್ಯದ ಜಗತ್ತನ್ನು ಪ್ರೇರೇಪಿಸುತ್ತದೆ ಎಂದು ಹೇಳಿದರು. ಮೊದಲ ವಿಶ್ವ ಯೋಗ ಚಾಂಪಿಯನ್‌ಶಿಪ್ ಯೋಗಾಸನಕ್ಕೆ ಜಾಗತಿಕ ಕ್ರೀಡೆಯ ಅಸ್ಮಿತೆಯನ್ನು ನೀಡುತ್ತದೆ. ಯುವ ಸಮೂಹಕ್ಕೆ ವ್ಯಾಪಕ ಶ್ರೇಣಿಯ ಅವಕಾಶಗಳನ್ನು ತೆರೆಯುತ್ತದೆ. ಪ್ರತಿಯೊಂದು ಪ್ರಮುಖ ಕ್ರೀಡೆಯು ತನ್ನದೇ ಆದ ಸಮಗ್ರ ಪರಿಸರ ವ್ಯವಸ್ಥೆಯನ್ನು ತರುತ್ತದೆ. ಯೋಗಾಸನ ಜಾಗತಿಕವಾಗಿ ವಿಸ್ತರಿಸಿದಂತೆ, ಅದು ಕ್ರೀಡಾಪಟುಗಳಿಗೆ ಗಮನಾರ್ಹವಾದ ಹೊಸ ಸಾಧ್ಯತೆಗಳು ಮತ್ತು ವೃತ್ತಿ ಮಾರ್ಗಗಳನ್ನು ಸೃಷ್ಟಿಸುತ್ತದೆ ಎಂದು ಅವರು ಹೇಳಿದರು. 'ಯೋಗ ೩೬೫' ಉಪಕ್ರಮದ ರಾಯಭಾರಿಗಳಾಗುತ್ತಿರುವ  ಕ್ರೀಡಾಪಟುಗಳು ಯೋಗದ ಸಂದೇಶವನ್ನು ತಮ್ಮ ದೇಶಗಳಿಗೆ ಕೊಂಡೊಯ್ಯಬೇಕು.  ಸ್ಪರ್ಧೆಯಲ್ಲಿ ಯಾರು ಗೆದ್ದರೂ, ಈ ಐತಿಹಾಸಿಕ ಅಧ್ಯಾಯದ ಭಾಗವಾಗುವ ಮೂಲಕ ಎಲ್ಲರೂ ಈಗಾಗಲೇ ಚಾಂಪಿಯನ್ ಆಗಿದ್ದಾರೆ ಎಂದು ಪ್ರಧಾನಿ ಹೇಳಿದರು. ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ, ಆಯುಷ್ ಸಚಿವಾಲಯ ಮತ್ತು ಭಾರತೀಯ ಕ್ರೀಡಾ ಪ್ರಾಧಿಕಾರದ ಬೆಂಬಲದೊಂದಿಗೆ, ಈ ಕಾರ್ಯಕ್ರಮವು ಯೋಗಾಸನವನ್ನು ಒಲಿಂಪಿಕ್ ಮಹತ್ವಾಕಾಂಕ್ಷೆಗಳೊಂದಿಗೆ ಜಾಗತಿಕವಾಗಿ ಸ್ಪರ್ಧಾತ್ಮಕ ಕ್ರೀಡೆಯನ್ನಾಗಿ ಪರಿವರ್ತಿಸುವ ನಿಟ್ಟಿನಲ್ಲಿ ಮಹತ್ವ ಪಡೆದುಕೊಂಡಿದೆ.

**********

ಜಕಾರ್ತದಲ್ಲಿ ನಡೆಯುತ್ತಿರುವ ಇಂಡೋನೇಷ್ಯಾ ಓಪನ್ ಬ್ಯಾಡ್ಮಿಂಟನ್‌ನ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಎಂ.ಆರ್.ಅರ್ಜುನ್ ಮತ್ತು ಹರಿಹರನ್ ಅಮ್ಸಕರುಣನ್ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ನಿನ್ನೆ ನಡೆದ ತೀವ್ರ ಪೈಪೋಟಿಯ ಪಂದ್ಯದಲ್ಲಿ ಭಾರತೀಯ ಜೋಡಿ, ಮಲೇಷ್ಯಾದ ಆರನ್ ತಾಯ್ ಮತ್ತು ಕಾಂಗ್ ಖೈ ಕ್ಸಿಂಗ್ ಅವರನ್ನು ೧೬-೨೧, ೨೧-೧೫ ಮತ್ತು ೨೧-೧೯ ಅಂತರದಿಂದ ಸೋಲಿಸಿತು.

*****END*****